ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/01/ಇಸಿಎಸ್(2)/2017

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01,
ದಿನಾಂಕ: 11-07-2017

## ಸುತ್ತೋಲೆ

ವಿಷಯ: 2017 ರ ಏಪ್ರಿಲ್/ಮೇ ಸೆಮಿಸ್ಟರ್ ಡಿಪ್ಲೋಮಾ ಪರೀಕ್ಷೆಗೆ ಸಂಬಂಧಿಸಿದಂತೆ ಉತ್ತರಪತ್ರಿಕೆಗಳ ಫೋಟೋ ಪ್ರತಿ ಪಡೆದ ನಂತರ ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸುವ ಕುರಿತು.
ಉಲ್ಲೇಖ: 1. ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/01/ಇಸಿಎಸ್(2)/2017 ದಿ: 01-07-2017

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2017 ರ ಏಪ್ರಿಲ್/ಮೇ ತಿಂಗಳನಲ್ಲಿ ನಡೆದ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗೆ ಸಂಬಂಧಿಸಿದಂತೆ, ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ಪಡೆದ ವಿದ್ಯಾರ್ಥಿಗಳು ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ, ಫೋಟೋ ಪ್ರತಿ ತಲುಪಿದ ದಿನದಿಂದ 03 ದಿನಗಳ ಒಳಗಾಗಿ ನಿಗದಿತ ಶುಲ್ಕ 550/- ರೂಗಳನ್ನು ಸರ್ಕಾರಿ ಪಾಲಿಟೆಕ್ನಿಕ್/ ಖಜಾನೆ ಇಲ್ಲಿ ಪಾವತಿಸಿ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ತಿಳಿಸಲಾಗಿದೆ. ಸಂಸ್ಥೆಗಳು ಸದರಿ ಮಾಹಿತಿಯನ್ನು BTELinx Online ವೆಬ್‌ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಲು **ದಿನಾಂಕ 13-07-2017 ಸಂಜೆ 5-00 ಗಂಟೆಯವರೆಗೆ** ಕಾಲಾವಕಾಶ ನಿಗದಿಪಡಿಸಲಾಗಿದೆ. ಈ ವಿಷಯವನ್ನು ಎಲ್ಲಾ ವಿದ್ಯಾರ್ಥಿಗಳ ಗಮನಕ್ಕೆ ತಪ್ಪದೇ ತರಲು ಹಾಗೂ ಸೂಕ್ತ ಕ್ರಮ ಕೈಗೊಳ್ಳಲು ಮೂಲಕ ತಿಳಿಸಲಾಗಿದೆ.

ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡದ ಮರುಮೌಲ್ಯಮಾಪನದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಮತ್ತೊಮ್ಮೆ ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ - ಮುಂದಿನ ಕ್ರಮಕ್ಕಾಗಿ

ಪ್ರತಿ:

1. ಇ – ಗವರ್ನೆನ್ಸ್ ವಿಭಾಗಕ್ಕೆ- ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2. ಗಣಕ ಕೇಂದ್ರಕ್ಕೆ- ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು
3. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂ.ಶಿ.ನಿ.